**All India Radio: Bangalore**
**Regional Bulletin In Kannada**
**04.01.2026 / 2.30 p.m.**
**ಆಕಾಶವಾಣಿ ಬೆಂಗಳೂರು**
**ಪ್ರದೇಶ ಸಮಾಚಾರ**
**04.01.2026 / 2.30 p.m.**
**<><><><>**

೧. ರಾಜ್ಯದಲ್ಲಿ ಡೀಮ್ಡ್ ಅರಣ್ಯ ಪ್ರದೇಶದ ಕುರಿತು ಪುನರ್ ಪರಿಶೀಲನೆ- ಅರಣ್ಯ ಸಚಿವ ಈಶ್ವರ ಖಂಡ್ರೆ

೨. ಬಳ್ಳಾರಿ ಗುಂಡಿನ ದಾಳಿ ಪ್ರಕರಣ; ಹಾಲಿ ಹೈಕೋರ್ಟ್ ನ್ಯಾಯಾಧೀಶರಿಂದ ತನಿಖೆಗೆ ಕೇಂದ್ರ ಸಚಿವ ವಿ.ಸೋಮಣ್ಣ ಆಗ್ರಹ

೩. ಹುಬ್ಬಳ್ಳಿಯಲ್ಲಿ ಒಂದೇ ದಿನ ಎರಡು ಪ್ರತ್ಯೇಕ ಪೋಕ್ಸೊ ಪ್ರಕರಣ ; ಏಳು ಮಂದಿ ಅಪ್ರಾಪ್ತರು ಪೊಲೀಸರ ವಶಕ್ಕೆ

೪. ದೇವರಾಯನದುರ್ಗದಲ್ಲಿ ವಿಷ ಪ್ರಾಶನದಿಂದ ಒಂಬತ್ತು ಮಂಗಗಳು, ಎರಡು ಲಂಗೂರ್‌ಗಳು ಸಾವು

****************

ರಾಜ್ಯದಲ್ಲಿ ಅರಣ್ಯ ಇಲಾಖೆ ೩ ಲಕ್ಷದ ೩೦ ಸಾವಿರ ಹೆಕ್ಟೇರ್ ಪ್ರದೇಶವನ್ನು ಡೀಮ್ಡ್ ಅರಣ್ಯ ಪ್ರದೇಶ ಎಂದು ಗುರುತಿಸಿದ್ದು, ಇದರಲ್ಲಿ ಹಲವು ಲೋಪದೋಷಗಳು ಕಂಡು ಬಂದಿರುವ ಕಾರಣ, ಪುನರ್‌ಪರಿಶೀಲಿಸುವ ಪ್ರಕ್ರಿಯೆಗೆ ಅರಣ್ಯ ಇಲಾಖೆ ಚಾಲನೆ ನೀಡಿದೆ ಎಂದು ಅರಣ್ಯ ಸಚಿವ ಈಶ್ವರ ಖಂಡ್ರೆ ತಿಳಿಸಿದ್ದಾರೆ. ಚಿಕ್ಕಬಳ್ಳಾಪುರ ಜಿಲ್ಲಾ ಕೇಂದ್ರದ ಉಪ ಅರಣ್ಯ ಸಂರಕ್ಷಣಾಧಿಕಾರಿಗಳ ಕಚೇರಿಯಲ್ಲಿ ಅರಣ್ಯ, ಪರಿಸರ ಮತ್ತು ಜೀವಶಾಸ್ತ್ರ ಇಲಾಖೆಯ ಹಿರಿಯ ಅಧಿಕಾರಿಗಳ ಸಭೆಯ ಅಧ್ಯಕ್ಷತೆ ವಹಿಸಿ ಪ್ರಗತಿ ಪರಿಶೀಲನೆ ನಡೆಸಿದ ನಂತರ ಸುದ್ದಿಗಾರರೊಂದಿಗೆ ಅವರು ಮಾತನಾಡಿದರು. ಕಂದಾಯ ಮತ್ತು ಅರಣ್ಯ ಇಲಾಖೆ ವತಿಯಿಂದ ಜಂಟಿ ಸಮೀಕ್ಷೆ ಕಾರ್ಯ ಪ್ರಗತಿಯಲ್ಲಿದೆ ಎಂದು ಹೇಳಿದರು.

**ಧ್ವನಿ : ಈಶ್ವರ ಖಂಡ್ರೆ ( 30 ನಿಮಿಷಗಳು)**

ಈಗಾಗಲೇ ಸಲ್ಲಿಸಿರುವ ಡೀಮ್ಡ್ ಅರಣ್ಯ ಪ್ರದೇಶ ವರದಿಯಲ್ಲಿ ಹಲವು ಗ್ರಾಮಗಳು, ಶಾಲೆಗಳು, ಅಂಗನವಾಡಿ ಕಟ್ಟಡಗಳು ಮತ್ತಿತರ ಆಸ್ತಿಗಳು ಸೇರಿವೆ ಎಂಬ ದೂರುಗಳು ಬಂದಿವೆ. ಸೆಕ್ಷನ್ ೪ ರ ಅಡಿಯ ಅರ್ಜಿಗಳನ್ನು ಶೀಘ್ರ ಇತ್ಯರ್ಥಪಡಿಸುವ ಜೊತೆಗೆ ಒತ್ತುವರಿ ತೆರವುಗೊಳಿಸಲೂ ಸಹ ಸೂಚನೆ ನೀಡಲಾಗಿದೆ ಎಂದು ಸಚಿವ ಈಶ್ವರ ಖಂಡ್ರೆ ತಿಳಿಸಿದರು. ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಹಸಿರು ಹೊದಿಕೆಯನ್ನು ಹೆಚ್ಚಿಸಲು ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ. ಜಿಲ್ಲೆಯಲ್ಲಿ ರಾಷ್ಟ್ರೀಯ ಹೆದ್ದಾರಿಗಳು, ರಾಜ್ಯ ಹೆದ್ದಾರಿಗಳು, ಜಿಲ್ಲಾ ಮುಖ್ಯ ರಸ್ತೆಗಳು ಹಾಗೂ ಗ್ರಾಮೀಣ ರಸ್ತೆಗಳು ಸೇರಿ ಒಟ್ಟು ೪ ಸಾವಿರ ಕಿಲೋ ಮೀಟರ್ ಉದ್ದದ ರಸ್ತೆಗಳಿವೆ. ಈ ರಸ್ತೆಗಳ

ಎರಡೂ ಬದಿಗಳಲ್ಲಿ ಗಿಡಗಳನ್ನು ನೆಡುವ ಮೂಲಕ ಹಸಿರು ಹೊದಿಕೆ ಹೆಚ್ಚಿಸಲು ಸೂಚಿಸಲಾಗಿದೆ ಎಂದರು. ನದಿ, ಹೊಳೆ ಸೇರಿದಂತೆ ವಿವಿಧ ಜಲಮೂಲಗಳಿಗೆ ತ್ಯಾಜ್ಯ ನೀರನ್ನು ಹರಿಸಿ, ಕಲುಷಿತಗೊಳಿಸುವ ಸ್ಥಳೀಯ ಸಂಸ್ಥೆಗಳ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸಲಾಗುವುದು ಎಂದು ಸಚಿವ ಈಶ್ವರ ಖಂಡ್ರೆ ಎಚ್ಚರಿಸಿದ್ದಾರೆ.

***************

ಬಳ್ಳಾರಿಯಲ್ಲಿ ಜನವರಿ ೧ ರಂದು ಬ್ಯಾನರ್ ಕಟ್ಟುವ ಸಂಬಂಧ ನಡೆದ ಘರ್ಷಣೆಯಲ್ಲಿ ಗುಂಡಿನ ದಾಳಿ ನಡೆದು, ಒಬ್ಬ ವ್ಯಕ್ತಿ ಸಾವನ್ನಪ್ಪಿರುವ ಘಟನೆಯನ್ನು ಹಾಲಿ ಹೈಕೋರ್ಟ್ ನ್ಯಾಯಾಧೀಶರಿಂದ ತನಿಖೆ ನಡೆಸಬೇಕು ಎಂದು ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ, ರಾಜ್ಯ ಸರ್ಕಾರವನ್ನು ಒತ್ತಾಯಿಸಿದ್ದಾರೆ. ಈ ಕುರಿತು ಬಳ್ಳಾರಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದ ಗೃಹ ಸಚಿವರು ಈ ಘಟನೆಯನ್ನು ಸಿಐಡಿ ತನಿಖೆಗೆ ನೀಡುವುದಾಗಿ ಹೇಳಿದ್ದಾರೆ. ಇದು ಸರಿಯಲ್ಲ. ಹಾಲಿ ಹೈಕೋರ್ಟ್ ನ್ಯಾಯಾಧೀಶರಿಂದ ಈ ಪ್ರಕರಣದ ತನಿಖೆ ನಡೆಸಬೇಕು. ಇಲ್ಲವಾದರೆ, ಈ ಪ್ರಕರಣವನ್ನು ಸಿಬಿಐಗೆ ಹಸ್ತಾಂತರಿಸಬೇಕು ಎಂದು ಆಗ್ರಹಿಸಿದರು.

***************

ಬಳ್ಳಾರಿ ನಗರದಲ್ಲಿ ಬ್ಯಾನರ್ ಗಲಾಟೆ, ಗುಂಡಿನ ದಾಳಿ ಪ್ರಕರಣದ ಹಿನ್ನೆಲೆಯಲ್ಲಿ ತಮಗೆ ಝಡ್ ಪ್ಲಸ್ ಭದ್ರತೆ ನೀಡುವಂತೆ ಶಾಸಕ ಜನಾರ್ದನ ರೆಡ್ಡಿ, ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರಿಗೆ ಪತ್ರ ಬರೆದು ಮನವಿ ಮಾಡಿದ್ದಾರೆ. ಅಲ್ಲದೇ, ಈ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಗೃಹ ಸಚಿವ ಡಾ.ಪರಮೇಶ್ವರ್, ಡಿಐಜಿ ಅವರಿಗೂ ಮನವಿ ಸಲ್ಲಿಸಿದ್ದಾರೆ. ಬಳ್ಳಾರಿಯಲ್ಲಿ ನಡೆದ ಗುಂಡಿನ ದಾಳಿ ಪೂರ್ವ ನಿಯೋಜಿತ. ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಅವರಿಂದ ತಮಗೆ ಜೀವ ಬೆದರಿಕೆ ಇದೆ. ತಮ್ಮ ಕುಟುಂಬಕ್ಕೆ ಅಗತ್ಯ ಭದ್ರತೆ ಒದಗಿಸಲು ರಾಜ್ಯ ಸರ್ಕಾರ ವಿಫಲವಾದ ಹಿನ್ನೆಲೆಯಲ್ಲಿ ತಮ್ಮ ಮೇಲೆ ದಾಳಿಯಾಗಿದೆ ಎಂದು ಶಾಸಕ ಜನಾರ್ದನ ರೆಡ್ಡಿ ಆರೋಪಿಸಿದ್ದಾರೆ.

***************

ಪ್ರಧಾನಿ ನರೇಂದ್ರ ಮೋದಿ ಅವರು ಫೆಬ್ರವರಿ ೨೩ರಂದು ಮಂಡ್ಯ ಜಿಲ್ಲೆಯ ನಾಗಮಂಗಲ ತಾಲೂಕಿನಲ್ಲಿರುವ ಶ್ರೀ ಕ್ಷೇತ್ರ ಆದಿಚುಂಚನಗಿರಿಗೆ ಭೇಟಿ ನೀಡಲಿದ್ದಾರೆ. ಭೇಟಿಯ ವೇಳೆ ಪ್ರಧಾನಿ ಅವರು ಶ್ರೀ ಬಾಲಗಂಗಾಧರನಾಥ ಶ್ರೀಗಳ ಗದ್ದುಗೆ ಉದ್ಘಾಟನೆ ನೆರವೇರಿಸಲಿದ್ದಾರೆ. ಬಳಿಕ ಶ್ರೀಮಠದ ಪೀಠಾಧಿಪತಿ ನಿರ್ಮಲಾನಂದ ಸ್ವಾಮೀಜಿ ಅವರ ವಾರ್ಷಿಕ ಪಟ್ಟಾಭಿಷೇಕ ಕಾರ್ಯಕ್ರಮದಲ್ಲಿ ಭಾಗಿಯಾಗಿ, ಶ್ರೀ ಕ್ಷೇತ್ರ ಮತ್ತು ಧಾರ್ಮಿಕ ವಿಚಾರವಾಗಿ ಭಾಷಣ ಮಾಡಲಿದ್ದಾರೆ.

***************

ಕೇಂದ್ರ ಸಂಸ್ಕೃತಿ ಮತ್ತು ಪ್ರವಾಸೋದ್ಯಮ ಖಾತೆ ಸಚಿವ ಗಜೇಂದ್ರ ಸಿಂಗ್ ಶೇಖಾವತ್, ನಾಳೆಯಿಂದ, ಎರಡು ದಿನಗಳ ಕಾಲ ರಾಜ್ಯ ಪ್ರವಾಸ ಕೈಗೊಳ್ಳಲಿದ್ದಾರೆ. ನಾಳೆ ಮಧ್ಯಾಹ್ನ ಹೊಸಪೇಟೆ ಸಮೀಪದ, ಯುನೆಸ್ಕೊ ವಿಶ್ವ ಪಾರಂಪರಿಕ ತಾಣ ಹಂಪಿಗೆ ಭೇಟಿ ನೀಡಿ, ವಿವಿಧ ಐತಿಹಾಸಿಕ ಸ್ಥಳಗಳನ್ನು ವೀಕ್ಷಿಸಲಿದ್ದಾರೆ. ಸಂಜೆ ಹಂಪಿಯ ಶ್ರೀ ವಿರೂಪಾಕ್ಷೇಶ್ವರ ದೇವರ ದರ್ಶನ ಪಡೆಯಲಿದ್ದಾರೆ.

****************

ಹುಬ್ಬಳ್ಳಿ ನಗರದಲ್ಲಿ ಒಂದೇ ದಿನ ಎರಡು ಪ್ರತ್ಯೇಕ ಪೋಕ್ಸೊ ಪ್ರಕರಣ ದಾಖಲಾಗಿದ್ದು, ಒಟ್ಟು ಏಳು ಮಂದಿ ಅಪ್ರಾಪ್ತರನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ. ಶಹರ ಮತ್ತು ಅಶೋಕ್ ನಗರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಅಪ್ರಾಪ್ತ ವಯಸ್ಕರಿಂದ ಇಬ್ಬರು ಬಾಲಕಿಯರ ಮೇಲೆ ಲೈಂಗಿಕ ದೌರ್ಜನ್ಯಕ್ಕೆ ಸಂಬಂಧಿಸಿದಂತೆ ಪ್ರತ್ಯೇಕ ಪ್ರಕರಣಗಳು ದಾಖಲಾಗಿವೆ ಎಂದು ಹುಬ್ಬಳ್ಳಿ-ಧಾರವಾಡ ಪೊಲೀಸ್ ಆಯುಕ್ತ ಎನ್.ಶಶಿಕುಮಾರ್ ತಿಳಿಸಿದ್ದಾರೆ. ಹುಬ್ಬಳ್ಳಿಯಲ್ಲಿ ಮಾಧ್ಯಮಗಳಿಗೆ ಮಾಹಿತಿ ನೀಡಿದ ಅವರು, ಶಹರ ಠಾಣೆ ವ್ಯಾಪ್ತಿಯಲ್ಲಿ ಮೂವರು ಅಪ್ರಾಪ್ತರಿಂದ ಒಬ್ಬ ಬಾಲಕಿ ಮೇಲೆ ಲೈಂಗಿಕ ದೌರ್ಜನ್ಯ ಎಸಗಲಾಗಿದೆ. ಲೈಂಗಿಕ ದೌರ್ಜನ್ಯ ಎಸಗಿದ ಮೂರು ಮಂದಿ ಆರೋಪಿಗಳನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಲಾಗಿದೆ. ಈ ಮೂವರು ಆರೋಪಿಗಳು ಕೂಡ ೧೫-೧೬ ವರ್ಷದವರಾಗಿದ್ದಾರೆ. ಆರೋಪಿಗಳು ವಿಡಿಯೋ ಮಾಡಿಕೊಂಡಿದ್ದರು ಎಂಬ ಬಗ್ಗೆ ಮಾಹಿತಿ ಇದೆ. ಅದರ ಬಗ್ಗೆ ಕೂಡ ತನಿಖೆ ನಡೆಸಲಾಗುತ್ತದೆ ಎಂದು ತಿಳಿಸಿದ್ದಾರೆ. ಮತ್ತೊಂದೆಡೆ, ಅಶೋಕ್ ನಗರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಅಪ್ರಾಪ್ತರಿಂದ ಒಬ್ಬ ಬಾಲಕಿಗೆ ಲೈಂಗಿಕ ಕಿರುಕುಳ ಮತ್ತು ಹಲ್ಲೆ ಮಾಡಿದ ಘಟನೆ ನಡೆದಿದೆ. ನಿನ್ನೆ ಶಾಲೆಯ ಸಾಂಸ್ಕೃತಿಕ ಕಾರ್ಯಕ್ರಮ ಮುಗಿಸಿಕೊಂಡು ಮನೆಗೆ ಹೋಗುತ್ತಿದ್ದ ಬಾಲಕಿ ಮೇಲೆ ಅದೇ ಶಾಲೆಯ ಇಬ್ಬರು ಬಾಲಕರು ಕಿರಿಕುಳ ನೀಡಿದ್ದಾರೆ. ಅಲ್ಲದೇ ಆಕೆಯನ್ನು ಥಳಿಸಲಾಗಿದೆ. ಬಾಲಕಿಯ ತಂದೆ ಮೇಲೂ ಆರೋಪಿಗಳು ಹಲ್ಲೆ ಮಾಡಿದ್ದಾರೆ. ಪ್ರಕರಣ ಸಂಬಂಧ ನಾಲ್ವರು ಅಪ್ರಾಪ್ತರನ್ನು ವಶಕ್ಕೆ ಪಡೆದು, ವಿಚಾರಣೆ ನಡೆಸಲಾಗುತ್ತಿದೆ ಎಂದು ಎನ್.ಶಶಿಕುಮಾರ್ ಮಾಹಿತಿ ನೀಡಿದ್ದಾರೆ.

****************

ದೇವರಾಯನದುರ್ಗದಲ್ಲಿ ೯ ಮಂಗಗಳು, ಎರಡು ಲಂಗೂರ್‌ಗಳು ವಿಷ ಪ್ರಾಶನದಿಂದ ಸಾವನ್ನಪ್ಪಿರುವುದು ಮರಣೋತ್ತರ ಪರೀಕ್ಷೆಯಿಂದ ದೃಢಪಟ್ಟಿದೆ ಎಂದು ಉಪಸಂರಕ್ಷಣಾಧಿಕಾರಿ ಶಶಿಧರ್ ತಿಳಿಸಿದ್ದಾರೆ. ಜನವರಿ ೨ರಂದು ದೇವರಾಯನದುರ್ಗದಲ್ಲಿ ೬ ಮಂಗಗಳು ಹಾಗೂ ಒಂದು ಲಂಗೂರ್ ಮೃತದೇಹ ಪತ್ತೆಯಾಗಿತ್ತು. ಜನವರಿ ೩ರಂದು ಮೂರು ಮಂಗಗಳು ಮತ್ತು ಒಂದು ಲಂಗೂರ್ ಮೃತದೇಹ ಪತ್ತೆಯಾಗಿತ್ತು. ಮೃತಪಟ್ಟಿರುವ ಮಂಗಗಳ ಮಾದರಿಯನ್ನು ಹೆಚ್ಚಿನ ಪರೀಕ್ಷೆಗಾಗಿ ಬೆಂಗಳೂರಿನ ಹೆಬ್ಬಾಳದ ಪಶುವೈದ್ಯಕೀಯ ವಿದ್ಯಾಲಯಕ್ಕೆ ಕಳುಹಿಸಲಾಗಿದೆ. ಪ್ರಸ್ತುತ ಯಾವುದೇ ಮಂಗಗಳು ಮಂಗನ ಕಾಯಿಲೆಯಿಂದ ಮೃತಪಟ್ಟಿರುವುದು ಕಂಡುಬಂದಿಲ್ಲ ಎಂದು ಅವರು ಮಾಹಿತಿ ನೀಡಿದರು. ಈ ಬಗ್ಗೆ ತುಮಕೂರು ಪ್ರಾದೇಶಿಕ ವಲಯದ ವಲಯ ಅರಣ್ಯಾಧಿಕಾರಿಗಳು

ಮೊಕದ್ದಮೆ ದಾಖಲಿಸಿ, ತನಿಖೆ ಕೈಗೊಂಡಿದ್ದು, ಕೃತ್ಯ ಎಸಗಿರುವ ಆರೋಪಿಗಳನ್ನು ಪತ್ತೆ ಹಚ್ಚುವ ಕಾರ್ಯ ಪ್ರಗತಿಯಲ್ಲಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

****************

ಅರೆ ಮಲೆನಾಡಿನ ಭಾಗದಲ್ಲಿ ಮನುಷ್ಯ ಹಾಗೂ ವನ್ಯ ಜೀವಿಗಳ ಸಂಘರ್ಷ ಮುಂದುವರಿದಿದೆ. ಶಿವಮೊಗ್ಗ ಜಿಲ್ಲೆ ಭದ್ರಾವತಿ ತಾಲೂಕಿನ ಉಕ್ಕುಂದದಲ್ಲಿ ಕರಡಿಯೊಂದು ರೈತರೊಬ್ಬರ ಮೇಲೆ ದಾಳಿ ನಡೆಸಿದೆ. ದಾಳಿಗೊಳಗಾದವರನ್ನು ೫೪ ವರ್ಷದ ದೇವರಾಜ್ ಎಂದು ಗುರುತಿಸಲಾಗಿದೆ. ಅವರ ತಲೆ ಹಾಗೂ ಕಿವಿಯ ಮೇಲ್ಭಾಗದಲ್ಲಿ ಗಾಯಗಳಾಗಿವೆ. ಅವರು ಭದ್ರಾವತಿ ಸಾರ್ವಜನಿಕ ಆಸ್ಪತ್ರೆಗೆ ದಾಖಲಾಗಿದ್ದಾರೆ.  ಮನೆ ಪಕ್ಕದಲ್ಲಿಯೇ ಇರುವ ಅಡಿಕೆ ತೋಟದಲ್ಲಿ ನೀರು ಕಟ್ಟಲು ನಿನ್ನೆ ರಾತ್ರಿ ದೇವರಾಜ್ ಅವರು ಹೋಗಿದ್ದಾಗ ಕರಡಿ ದಾಳಿ ನಡೆಸಿದೆ.

****************

ಹಾವೇರಿ ಜಿಲ್ಲಾಸ್ಪತ್ರೆಯಲ್ಲಿ ೨೧ ಕೋಟಿ ರೂಪಾಯಿ ವೆಚ್ಚದಲ್ಲಿ ಕಟ್ಟಡ ನಿರ್ಮಿಸಲಾಗಿದ್ದು, ೩೩೦ರಿಂದ ೫೦೦ ಬೆಡ್‌ಗೆ ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸಲಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಶಿವಾನಂದ ಪಾಟೀಲ ತಿಳಿಸಿದ್ದಾರೆ.

ನನೆಗುದಿಗೆ ಬಿದ್ದಿದ್ದ ಎಂಆರ್‌ಐ ಸ್ಕ್ಯಾನಿಂಗ್ ಯಂತ್ರ ಅಳವಡಿಸುವ ಕಾರ್ಯ ಎರಡು ತಿಂಗಳಲ್ಲಿ ಆಗಲಿದೆ. ಕಳೆದ ಡಿಸೆಂಬರ್ ೨೩ಕ್ಕೆ ಫಿಲಿಪ್ಸ್ ಇಂಡಿಯಾ ಪ್ರೈವೇಟ್ ಲಿಮಿಟೆಡ್ ಕಂಪನಿಗೆ ಟೆಂಡರ್ ಆಗಿದ್ದು, ಜಿಲ್ಲಾಸ್ಪತ್ರೆ ಅಥವಾ ಹಿಮ್ಸ್‌ನಲ್ಲಿ ಎಂಆರ್‌ಐ ಸ್ಕ್ಯಾನಿಂಗ್ ಯಂತ್ರ ಅಳವಡಿಸುವ ಕುರಿತು ಚರ್ಚಿಸಲಾಗುತ್ತಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

**************